Akashvani : Bangalore
National Bulletins In Kannada
26.09.2025 / 7.3.5 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
26.09.2025 / 7.3.5 am
<><*<><>*><>
ಮುಖ್ಯಾಂಶಗಳು :

೧. ಜಾಗತಿಕ ಆಹಾರ ಭದ್ರತೆಗೆ ಭಾರತ ಸಕ್ರಿಯ ಕೊಡುಗೆ- ಪ್ರಧಾನಿ ನರೇಂದ್ರ ಮೋದಿ

೨. ಬ್ಯಾಂಕಿಂಗ್ ವಲಯದಲ್ಲಿ ಸರ್ಕಾರದಿಂದ ಮೂರು ಲಕ್ಷ ಕೋಟಿ ರೂಪಾಯಿ ಹೂಡಿಕೆ- ಕೇಂದ್ರ ಸಚಿವ ಅಮಿತ್ ಶಾ

೩. ಭಯೋತ್ಪಾದನೆ ವಿರುದ್ಧ ಅಂತಾರಾಷ್ಟ್ರೀಯ ಸಮುದಾಯದಿಂದ ಶೂನ್ಯ ಸಹಿಷ್ಣುತೆ ಅಗತ್ಯ- ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್

೪. ಏಷ್ಯಾ ಕಪ್ ಟಿ-೨೦ ಕ್ರಿಕೆಟ್: ಫೈನಲ್‌ನಲ್ಲಿ ಭಾರತ-ಪಾಕಿಸ್ತಾನ ಮುಖಾಮುಖಿ

><><><><><><

ಜಾಗತಿಕ ಹೂಡಿಕೆದಾರರು, ವಿಶೇಷವಾಗಿ ಆಹಾರ ವಲಯದಲ್ಲಿರುವವರು, ಭಾರತದತ್ತ ಹೆಚ್ಚಿನ ಆಶಾವಾದದಿಂದ ನೋಡುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ವಿಶ್ವ ಆಹಾರ ಭಾರತ ೨೦೨೫ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಬಲವಾದ ದೇಶೀಯ ಬೇಡಿಕೆಯು ಭಾರತಕ್ಕೆ ಸ್ಪರ್ಧಾತ್ಮಕ ಅಂಚನ್ನು ನೀಡುತ್ತದೆ ಮತ್ತು ಹೂಡಿಕೆದಾರರಿಗೆ ಇದು ಆದ್ಯತೆಯ ತಾಣವಾಗಿದೆ ಎಂದರು. ಜಾಗತಿಕ ಸವಾಲುಗಳು ಉದ್ಭವಿಸಿದಾಗಲೆಲ್ಲಾ ಭಾರತವು ಸಕಾರಾತ್ಮಕ ಪಾತ್ರ ವಹಿಸಲು ನಿರಂತರವಾಗಿ ಮುಂದೆ ಬಂದಿದೆ. ಜಾಗತಿಕ ಆಹಾರ ಭದ್ರತೆಗೆ ಭಾರತ ಸಕ್ರಿಯವಾಗಿ ಕೊಡುಗೆ ನೀಡುತ್ತಿದೆ ಎಂದು ಹೇಳಿದರು. ಜಾಗತಿಕ ಬೆಳೆ ಬಿಕ್ಕಟ್ಟು ಅಥವಾ ಪೂರೈಕೆ ಸರಪಳಿ ಅಡಚಣೆ ಉಂಟಾದಾಗಲೆಲ್ಲಾ ಭಾರತವು ದೃಢವಾಗಿ ನಿಲ್ಲುತ್ತದೆ ಮತ್ತು ತನ್ನ ಜವಾಬ್ದಾರಿಯನ್ನು ಪೂರೈಸುತ್ತದೆ. ಜಾಗತಿಕ ಹಿತಾಸಕ್ತಿಯಲ್ಲಿ ಭಾರತವು ತನ್ನ ಸಾಮರ್ಥ್ಯ ಮತ್ತು ಕೊಡುಗೆಯನ್ನು ವಿಸ್ತರಿಸಲು ಬದ್ಧವಾಗಿದೆ. ಸರ್ಕಾರವು ಪ್ರತಿಯೊಬ್ಬ ಪಾಲುದಾರರನ್ನು ತೊಡಗಿಸಿಕೊಳ್ಳುವ ಮೂಲಕ ಇಡೀ ಆಹಾರ ಮತ್ತು ಪೌಷ್ಟಿಕಾಂಶ ಪರಿಸರ ವ್ಯವಸ್ಥೆಯನ್ನು ಬಲಪಡಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಇಂದು ಭಾರತವು ವಿಶ್ವದ ಮೂರನೇ ಅತಿದೊಡ್ಡ ನವೋದ್ಯಮ ಪರಿಸರ ವ್ಯವಸ್ಥೆಯಾಗಿದ್ದು, ಆಹಾರ ಮತ್ತು ಕೃಷಿ ಕ್ಷೇತ್ರಗಳಲ್ಲಿ ಅನೇಕ ನವೋದ್ಯಮಗಳು ಕಾರ್ಯನಿರ್ವಹಿಸುತ್ತಿವೆ ಎಂದರು. ಸಣ್ಣ ರೈತರು ಮಾರುಕಟ್ಟೆಯಲ್ಲಿ ಪ್ರಮುಖ ಶಕ್ತಿಯಾಗುತ್ತಿದ್ದಾರೆ ಮತ್ತು ಸರ್ಕಾರವು ಸಣ್ಣ ರೈತರಿಗೆ ಸಹಾಯ ಮಾಡುವ ಉದ್ದೇಶದಿಂದ ಹಲವಾರು

ನೀತಿಗಳನ್ನು ಹೊಂದಿದೆ. ಭಾರತದಲ್ಲಿ, ಸಹಕಾರಿ ಸಂಸ್ಥೆಗಳು ಡೇರಿ ವಲಯ ಮತ್ತು ಗ್ರಾಮೀಣ ಆರ್ಥಿಕತೆಗೆ ಹೊಸ ಶಕ್ತಿಯನ್ನು ನೀಡುತ್ತಿವೆ ಎಂದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

><><><><><

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಬಿಹಾರದ ಮುಖ್ಯಮಂತ್ರಿ ಮಹಿಳಾ ರೋಜ್‌ಗಾರ್ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ, ಪ್ರಧಾನಮಂತ್ರಿಯವರು ಬಿಹಾರದಾದ್ಯಂತ ೭೫ ಲಕ್ಷ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ತಲಾ ೧೦ ಸಾವಿರ ರೂಪಾಯಿಗಳನ್ನು ನೇರವಾಗಿ ವರ್ಗಾಯಿಸಲಿದ್ದಾರೆ. ಬಿಹಾರ ಸರ್ಕಾರದ ಈ ಉಪಕ್ರಮವು ಮಹಿಳೆಯರನ್ನು ಆತ್ಮನಿರ್ಭರರನ್ನಾಗಿ ಮಾಡುವುದು ಮತ್ತು ಸ್ವ-ಉದ್ಯೋಗ ಹಾಗೂ ಜೀವನೋಪಾಯದ ಅವಕಾಶಗಳ ಮೂಲಕ ಮಹಿಳೆಯರ ಸಬಲೀಕರಣವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಸಮುದಾಯ ಚಾಲಿತವಾಗಿದ್ದು, ಫಲಾನುಭವಿ ಮಹಿಳೆಯರನ್ನು ಸ್ವಸಹಾಯ ಗುಂಪುಗಳೊಂದಿಗೆ ಸಂಪರ್ಕಿಸುವ ಮೂಲಕ ಅವರಿಗೆ ಆರ್ಥಿಕ ಬೆಂಬಲ ಮತ್ತು ತರಬೇತಿಯನ್ನು ಒದಗಿಸುತ್ತದೆ. ಈ ಸಹಾಯವು ಫಲಾನುಭವಿಗಳು ತಮ್ಮ ಆಯ್ಕೆಯ ಉದ್ಯೋಗ ಅಥವಾ ಜೀವನೋಪಾಯ ಚಟುವಟಿಕೆಗಳನ್ನು ಪ್ರಾರಂಭಿಸಲು ಮತ್ತು ಆರ್ಥಿಕ ಸ್ವಾತಂತ್ರ್ಯ ಮತ್ತು ಸಾಮಾಜಿಕ ಸಬಲೀಕರಣವನ್ನು ಬೆಳೆಸಲು ಅನುವು ಮಾಡಿಕೊಡುತ್ತದೆ ಎಂದು ಪ್ರಧಾನಮಂತ್ರಿಗಳ ಕಾರ್ಯಾಲಯ ತಿಳಿಸಿದೆ.

><><><><><

ಕೇಂದ್ರದ 'ಮೇಕ್ ಇನ್ ಇಂಡಿಯಾ ೨.೦' ಉಪಕ್ರಮವು ಮುಂದಿನ ೨೫ ವರ್ಷಗಳಲ್ಲಿ ಜಾಗತಿಕ ಆರ್ಥಿಕತೆಯ ದೊಡ್ಡ ಭಾಗವಾಗುವ ಉದಯೋನ್ಮುಖ ವಲಯಗಳ ಮೇಲೆ ಕೇಂದ್ರೀಕರಿಸುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಮುಂಬೈನಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಭಾರತದ ಚೈತನ್ಯಶೀಲ ಆರ್ಥಿಕತೆಯು ಜಾಗತಿಕ ರಂಗದಲ್ಲಿ ಒಂದು ಉಜ್ವಲ ತಾಣವಾಗಿದೆ ಎಂದರು. ಬಲವಾದ ಆರ್ಥಿಕ ಸಾಧನೆ, ರಾಜಕೀಯ ಸ್ಥಿರತೆ ಆರ್ಥಿಕತೆಯ ಪ್ರಮುಖ ಆಧಾರಸ್ತಂಭಗಳಾಗಿವೆ ಮತ್ತು ದೀರ್ಘಕಾಲೀನ ಸುಧಾರಣೆಗಳ ಜೊತೆಗೆ ಭಾರತವು ಜಾಗತಿಕವಾಗಿ ಉಜ್ವಲವಾಗಿ ಬೆಳಗುತ್ತಿದೆ ಎಂದು ಅವರು ಹೇಳಿದರು. ಭ್ರಷ್ಟಾಚಾರ ಮತ್ತು ಪಾರದರ್ಶಕತೆಯ ಕೊರತೆಯಿಂದ ಬಳಲುತ್ತಿದ್ದ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಸುಧಾರಣೆಗಳನ್ನು ಪ್ರಾರಂಭಿಸಿದರು. ಬಡವರಿಗೆ ಬ್ಯಾಂಕಿಂಗ್ ಪ್ರವೇಶವನ್ನು ನೀಡಲು ಕಳೆದ ೧೦ ವರ್ಷಗಳಲ್ಲಿ ಒಟ್ಟು ೫೩ ಕೋಟಿ ಬ್ಯಾಂಕ್ ಖಾತೆಗಳನ್ನು ತೆರೆಯಲಾಗಿದೆ ಎಂದು ಅಮಿತ್ ಶಾ ತಿಳಿಸಿದರು. ಅನುತ್ಪಾದಕ ಆಸ್ತಿಗಳ ದತ್ತಾಂಶದಲ್ಲಿ ಸರ್ಕಾರ ಪಾರದರ್ಶಕತೆಯನ್ನು ತಂದಿದೆ. ಬ್ಯಾಂಕಿಂಗ್ ವಲಯದಲ್ಲಿ ಸರ್ಕಾರ ೩.೧೦ ಲಕ್ಷ ಕೋಟಿ ರೂಪಾಯಿಗಳನ್ನು ಹೂಡಿಕೆ ಮಾಡಿದೆ ಎಂದು ಅವರು ಹೇಳಿದರು. ದೇಶವು ಉತ್ಪಾದನಾ

ಕೇಂದ್ರವಾಗಲು ನೀತಿ ಸುಧಾರಣೆಗಳನ್ನು ತರುವಲ್ಲಿ ಮೇಕ್ ಇನ್ ಇಂಡಿಯಾ ಪ್ರಮುಖ ಪಾತ್ರ ವಹಿಸಿದೆ. ಹಸಿರು ಬೆಳವಣಿಗೆ, ರಕ್ಷಣಾ ಉತ್ಪಾದನೆಯು ಭವಿಷ್ಯದಲ್ಲಿ ಬೆಳವಣಿಗೆಗೆ ಪ್ರಮುಖ ಅಂಶಗಳಾಗಿವೆ ಎಂದು ಸಚಿವ ಅಮಿತ್ ಶಾ ಹೇಳಿದರು.

><><><><><

ಭಯೋತ್ಪಾದನೆಯ ವಿರುದ್ಧ ಹೋರಾಡುತ್ತಿರುವವರು ಅಂತಾರಾಷ್ಟ್ರೀಯ ಸಮುದಾಯಕ್ಕೆ ಸೇವೆ ಸಲ್ಲಿಸುತ್ತಿದ್ದಾರೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಪ್ರತಿಪಾದಿಸಿದ್ದರೆ. ನ್ಯೂಯಾರ್ಕ್‌ನಲ್ಲಿ ನಡೆದ ಜಿ೨೦ ವಿದೇಶಾಂಗ ಸಚಿವರ ಸಭೆಯಲ್ಲಿ ಆಪರೇಷನ್ ಸಿಂದೂರ್ ಪ್ರಕರಣವನ್ನು ಜೈಶಂಕರ್ ಪ್ರಸ್ತಾಪಿಸಿದರು. ಭಯೋತ್ಪಾದನೆಯು ಅಭಿವೃದ್ಧಿ ಮತ್ತು ಶಾಂತಿಗೆ ಬೆದರಿಕೆಯಾಗಿದೆ. ಭಯೋತ್ಪಾದಕ ಚಟುವಟಿಕೆಗಳ ಬಗ್ಗೆ ಜಗತ್ತು ಶೂನ್ಯ ಸಹಿಷ್ಣುತೆಯನ್ನು ತೋರಿಸಬೇಕಾದ ಅಗತ್ಯವಿದೆ ಎಂದು ಅವರು ಒತ್ತಿ ಹೇಳಿದರು. ಅಂತಾರಾಷ್ಟ್ರೀಯ ಶಾಂತಿ ಮತ್ತು ಜಾಗತಿಕ ಅಭಿವೃದ್ಧಿಯ ನಡುವಿನ ಪರಸ್ಪರ ಸಂಬಂಧದ ಮೇಲೆ ಭಾರತ ಗಮನ ಹರಿಸುತ್ತಿದೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ತಿಳಿಸಿದರು.

><><><><><

೯೭ ಲಘು ಯುದ್ಧ ವಿಮಾನ ಎಂಕೆ-೧-ಎ ಯುದ್ಧ ವಿಮಾನಗಳನ್ನು ಖರೀದಿಗಾಗಿ ರಕ್ಷಣಾ ಸಚಿವಾಲಯ, ಎಚ್‌ಎಎಲ್ ನೊಂದಿಗೆ ೬೨ ಸಾವಿರದ ೩೭೦ ಕೋಟಿ ರೂಪಾಯಿ ಮೌಲ್ಯದ ಒಪ್ಪಂದ ಮಾಡಿಕೊಂಡಿದೆ. ಇದರಲ್ಲಿ ೬೮ ಯುದ್ಧ ವಿಮಾನಗಳು ಮತ್ತು ೨೯ ಅವಳಿ ಆಸನಗಳ ವಿಮಾನಗಳು ಮತ್ತು ಭಾರತೀಯ ವಾಯುಪಡೆಗೆ ಸಂಬಂಧಿಸಿದ ಉಪಕರಣಗಳು ಸೇರಿವೆ. ಈ ವಿಮಾನಗಳ ವಿತರಣೆ ೨೦೨೭-೨೮ ರಲ್ಲಿ ಪ್ರಾರಂಭವಾಗಲಿದ್ದು, ಆರು ವರ್ಷಗಳ ಅವಧಿಯಲ್ಲಿ ಪೂರ್ಣಗೊಳ್ಳಲಿದೆ. ಉತ್ತಮ್ ಆಕ್ಟಿವ್ ಎಲೆಕ್ಟ್ರಾನಿಕ್ ಸ್ಕ್ಯಾನ್ಡ್ ಅರೇ ರೆಡಾರ್, ಸ್ವಯಂ ರಕ್ಷಾ ಕವಚ ಮತ್ತಿತರ ಸುಧಾರಿತ ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ವ್ಯವಸ್ಥೆಗಳ ಸಂಯೋಜನೆ ಆತ್ಮನಿರ್ಭರ್ ಉಪಕ್ರಮಗಳನ್ನು ಮತ್ತಷ್ಟು ಬಲಪಡಿಸುತ್ತದೆ. ಒಪ್ಪಂದದಡಿ ಕೈಗೊಳ್ಳುವ ಉತ್ಪಾದನೆ, ಆರು ವರ್ಷಗಳ ಅವಧಿಗೆ ವರ್ಷಕ್ಕೆ ೧೧ ಸಾವಿರಕ್ಕೂ ಹೆಚ್ಚು ನೇರ ಮತ್ತು ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ, ಇದು ದೇಶೀಯ ಏರೋಸ್ಪೇಸ್ ಪರಿಸರ ವ್ಯವಸ್ಥೆಗೆ ಪ್ರಮುಖ ಉತ್ತೇಜನ ನೀಡುತ್ತದೆ ಎಂದು ಸಚಿವಾಲಯ ತಿಳಿಸಿದೆ.

><><><><><

ಬೆಂಗಳೂರಿನ ಜಾಲಹಳ್ಳಿ ಕೇಂದ್ರೀಯ ವಿದ್ಯಾಲಯದಲ್ಲಿ ನಡೆದ ಸ್ವಚ್ಛತಾ ಅಭಿಯಾನದ ಹಿನ್ನೆಲೆಯಲ್ಲಿ ಸ್ವಚ್ಛತಾ ಕೆಲಸಗಾರರಿಗೆ ಮತ್ತು ರಕ್ಷಣಾ ಪಾಲಕರಿಗೆ ಶಾಲೆಯ ಪ್ರಾಚಾರ್ಯರಾದ ರವೀಂದ್ರ ದೇವಾಡಿಗ ಸನ್ಮಾನಿಸಿದರು. ಇದೇ ವೇಳೆ ಸ್ವಾಮಿ ವಿವೇಕಾನಂದರ ಆದರ್ಶ ಆಧಾರಿತ ಮತ್ತು ಪ್ರಧಾನಿ ನರೇಂದ್ರ ಮೋದಿ ಬಾಲ್ಯದ ದಿನಗಳ

ಚರಿತ್ರೆ ಆಧಾರಿತ ಕಿರು ಚಿತ್ರ 'ಚಲೋ ಜೀತೆ ಹೈ' ಎಂಬ ೩೫ ನಿಮಿಷದ ಕಿರುಚಿತ್ರವನ್ನು ವಿದ್ಯಾರ್ಥಿಗಳು ವೀಕ್ಷಿಸಲು ವ್ಯವಸ್ಥೆ ಮಾಡಲಾಗಿತ್ತು. ಈ ಚಿತ್ರದ ಕುರಿತು ವಿದ್ಯಾರ್ಥಿಗಳಾದ ಅಮೋಘ ಗೌಡ ಮತ್ತು ಜತಿನ್ ತಮ್ಮ ಅಭಿಪ್ರಾಯವನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡಿದ್ದಾರೆ.

ಧ್ವನಿ: ಅಮೋಘ ಗೌಡ

ಧ್ವನಿ: ಜತಿನ್

><><><><><

ಜಗತ್ತು ಅನಿಶ್ಚಿತತೆಯನ್ನು ಎದುರಿಸುತ್ತಿರುವಾಗ ಸ್ವಾವಲಂಬನೆ, ತಂತ್ರಜ್ಞಾನ, ಬಹು-ಧ್ರುವೀಯತೆ ಮತ್ತು ದಕ್ಷಿಣ-ದಕ್ಷಿಣ ಸಹಕಾರವು ಪರಸ್ಪರ ಬಲಪಡಿಸುವುದನ್ನು ನೋಡುತ್ತದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನ್ಯೂಯಾರ್ಕ್‌ನಲ್ಲಿ ನಡೆದ ವಾರ್ಷಿಕ ಒಆರ್‌ಎಫ್ ಚರ್ಚೆಯಲ್ಲಿ ಮಾತನಾಡಿದ ಡಾ. ಜೈಶಂಕರ್, ವ್ಯಾಪಾರವು ಸುಂಕ ಮತ್ತು ಸುಂಕೇತರ ಅಡೆತಡೆಗಳನ್ನು ನಿವಾರಿಸಲು ಒಂದು ಮಾರ್ಗವನ್ನು ಕಂಡುಕೊಳ್ಳುತ್ತದೆ. ಹೊಸ ಆದ್ಯತೆಗಳು ಮತ್ತು ಹರಿವುಗಳನ್ನು ಸೃಷ್ಟಿಸುತ್ತದೆ ಹಾಗೂ ಭೌತಿಕ ಮತ್ತು ಡಿಜಿಟಲ್ ದಕ್ಷತೆಯನ್ನು ಹೆಚ್ಚಿಸುತ್ತದೆ ಎಂದರು.

><><><><><

ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ೨೦೨೫ ರ ಸೂಪರ್ ಫೋರ್ ಹಂತದ ಪಂದ್ಯದಲ್ಲಿ ಬಾಂಗ್ಲಾದೇಶವನ್ನು ೧೧ ರನ್‌ಗಳಿಂದ ಸೋಲಿಸುವ ಮೂಲಕ ಪಾಕಿಸ್ತಾನ ಫೈನಲ್ ಪ್ರವೇಶಿಸಿದೆ. ಈ ಗೆಲುವಿನೊಂದಿಗೆ, ಪಾಕಿಸ್ತಾನ ಇದೇ ಭಾನುವಾರ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಭಾರತವನ್ನು ಎದುರಿಸಲಿದೆ. ಗಮನಾರ್ಹವಾಗಿ, ಏಷ್ಯಾ ಕಪ್‌ನ ೧೭ ಆವೃತ್ತಿಗಳಲ್ಲಿ ಮೊದಲ ಬಾರಿಗೆ ಭಾರತ ಮತ್ತು ಪಾಕಿಸ್ತಾನ ಫೈನಲ್‌ನಲ್ಲಿ ಮುಖಾಮುಖಿಯಾಗಲಿವೆ. ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ, ನಿಗದಿತ ೨೦ ಓವರ್‌ಗಳಿಗೆ ೮ ವಿಕೆಟ್ ನಷ್ಟಕ್ಕೆ ೧೩೫ ರನ್ ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಬಾಂಗ್ಲಾದೇಶ ನಿಗದಿತ ೨೦ ಓವರ್‌ಗಳಿಗೆ ೯ ವಿಕೆಟ್ ನಷ್ಟಕ್ಕೆ ೧೨೪ ರನ್ ಗಳಿಸಲಷ್ಟೇ ಶಕ್ತವಾಯಿತು. ಇದೇ ವೇಳೆ ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಸೂಪರ್ ಫೋರ್ ಹಂತದ ಪಂದ್ಯದಲ್ಲಿ ಭಾರತ ಮತ್ತು ಶ್ರೀಲಂಕಾ ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

><><><END><><><